# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(5ಜಿ)ಪಿಆರ್/ಇ-92746/24-25

ಮುಖ್ಯ ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 28.10.24

**ಕಛೇರಿ ಆದೇಶ**

ವಿಷಯ: "ಹೆಸರಾಯಿತು ಕರ್ನಾಟಕ, ಉಸಿರಾಗಲಿ ಕನ್ನಡ" ಅಭಿಯಾನದಡಿ ಎಲ್ಲಾ ಸರ್ಕಾರಿ ನೌಕರರು ಕೆಂಪು-ಹಳದಿ ಬಣ್ಣದ ಗುರುತಿನ ಚೀಟಿಯ ಕೊರಳುದಾರವನ್ನು (ಟ್ಯಾಗ್) ಹಾಕಿಕೊಳ್ಳುವುದರ ಕುರಿತು.

ಉಲ್ಲೇಖ:
1) ಸರ್ಕಾರದ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ರಾಜಕೀಯ) ರವರ ಸುತ್ತೋಲೆ ಸಂಖ್ಯೆ: ಸಿಆಸುಇ 4 ರಾಸ 2024, ದಿನಾಂಕ: 16-08-2024
2) ಈ ಕಛೇರಿ ಟಿಪ್ಪಣಿ ಸಂಖ್ಯೆ: ಬಿ12(5ಜಿ)ಪಿ.ಆರ್/ಇ-92746/24-25 ದಿ: 23-10-2024
3) ಮಾನ್ಯ ಆಡಳಿತಗಾರರು ಬಿ.ಬಿ.ಎಂ.ಪಿರವರ ನಡುವಳಿ ವಿಷಯ ಸಂಖ್ಯೆ: 259/2024-25 ದಿನಾಂಕ: 25-10-2024

---------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ-(1)ರ ಸರ್ಕಾರದ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಈ ಕೆಳಕಂಡಂತೆ ಸುತ್ತೋಲೆಯನ್ನು ಹೊರಡಿಸಿರುತ್ತದೆ.

ನಮ್ಮ ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣಗೊಳಿಸಿ 50 ವರ್ಷಗಳು ಪೂರೈಸಿರುವ ಸುಸಂದರ್ಭದಲ್ಲಿ "ಹೆಸರಾಯಿತು ಕರ್ನಾಟಕ, ಉಸಿರಾಗಲಿ ಕನ್ನಡ" ಅಭಿಯಾನದಡಿ ಎಲ್ಲಾ ರಾಜ್ಯ ಸರ್ಕಾರಿ ನೌಕರರು ಕೆಂಪು-ಹಳದಿ ಬಣ್ಣಗಳನ್ನು ಒಳಗೊಂಡಿರುವ ಕೊರಳುದಾರ (ಟ್ಯಾಗ್) ಹೊಂದಿದ ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಧರಿಸಬೇಕೆಂದು ಸರ್ಕಾರವು ನಿರ್ಣಯಿಸಿದೆ.

ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳು, ನಿಗಮ, ಮಂಡಳಿ, ನಿರ್ದೇಶನಾಲಯ, ಆಯುಕ್ತಾಲಯ ಇತ್ಯಾದಿ ಸರ್ಕಾರಿ ಮತ್ತು ಸರ್ಕಾರಿ ಸ್ವಾಮ್ಯದ ಕಛೇರಿಗಳಲ್ಲಿ ಕರ್ತವ್ಯ ನಿರ್ವಹಿಸುವ ಎಲ್ಲಾ ಅಧಿಕಾರಿ / ಸಿಬ್ಬಂದಿಗಳು ತಮ್ಮ ಇಲಾಖೆ / ಸಂಸ್ಥೆಯ ಗುರುತಿನ ಚೀಟಿಯನ್ನು ಧರಿಸಲು ಅನುವಾಗುವಂತೆ ಹಳದಿ ಮತ್ತು ಕೆಂಪು ಬಣ್ಣದ ಕೊರಳುದಾರವನ್ನು ಒದಗಿಸಲು ತಮ್ಮ ಇಲಾಖೆ / ಸಂಸ್ಥೆಯ ಸಕ್ಷಮ ಪ್ರಾಧಿಕಾರಗಳು ಕೂಡಲೇ ನಿಯಮಗಳನುಸಾರ ಕ್ರಮವಹಿಸುವಂತೆ ತಿಳಿಸಲಾಗಿದ್ದು, ನೂತನ ಕೊರಳುದಾರದ ವಿನ್ಯಾಸವನ್ನು https://photos.app.goo.gl/ycjeNHnDNPecW8Q48 ಆನ್‌ಲೈನ್ ವಿಳಾಸದಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು" ಎಂದು ತಿಳಿಸಲಾಗಿರುತ್ತದೆ.

ಮೇಲ್ಕಂಡ ಸರ್ಕಾರದ ಸುತ್ತೋಲೆಯನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಅಳವಡಿಸಿಕೊಳ್ಳುವ ಸಂಬಂಧ ಉಲ್ಲೇಖ-(2)ರಂತೆ ತೆರಿಗೆ, ಹಣಕಾಸು ಮತ್ತು ಅಪೀಲುಗಳ ಸ್ಥಾಯಿ ಸಮಿತಿಯ ಅಧಿಕಾರವನ್ನು ಚಲಾಯಿಸಿ ತೀರ್ಮಾನಕ್ಕಾಗಿ ಮಾನ್ಯ ಆಡಳಿತಗಾರರ ಮುಂದೆ ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರು ಟಿಪ್ಪಣಿ ಮಂಡಿಸಿದ್ದು, ಉಲ್ಲೇಖ-(3)ರಂತೆ ಮಾನ್ಯ ಆಡಳಿತಗಾರರು ವಿಷಯ ಸಂಖ್ಯೆ: 259/2024-25 ದಿನಾಂಕ: 25-10-2024ರಂದು ಟಿಪ್ಪಣಿಯನ್ನು ಒಪ್ಪಿರುವುದರಿಂದ, ಈ ಕೆಳಕಂಡಂತೆ ಆದೇಶವನ್ನು ಹೊರಡಿಸಲಾಗಿದೆ.

**ಆದೇಶ**

**ಸಂಖ್ಯೆ: ಬಿ12(5ಜಿ)/ಪಿಆರ್/ಇ-92746/2024-25** **ದಿನಾಂಕ:** 28.10.24.

ಪ್ರಸ್ತಾವನೆಯಲ್ಲಿ ವಿವರಿಸಿರುವ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ, "ಹೆಸರಾಯಿತು ಕರ್ನಾಟಕ, ಉಸಿರಾಗಲಿ ಕನ್ನಡ" ಅಭಿಯಾನದಡಿ ಎಲ್ಲಾ ಸರ್ಕಾರಿ ನೌಕರರು ಕೆಂಪು-ಹಳದಿ ಬಣ್ಣದ ಗುರುತಿನ ಚೀಟಿಯ ಕೊರಳುದಾರವನ್ನು (ಟ್ಯಾಗ್) ಕಡ್ಡಾಯವಾಗಿ ಧರಿಸಬೇಕೆಂದು ಹೊರಡಿಸಲಾಗಿರುವ ಉಲ್ಲೇಖ-(1)ರ ಸರ್ಕಾರದ ಸುತ್ತೋಲೆಯನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ

ಅಳವಡಿಸಿಕೊಳ್ಳಲು ಉಲ್ಲೇಖ-(3)ರಂತೆ ತೆರಿಗೆ, ಹಣಕಾಸು ಮತ್ತು ಅಪೀಲುಗಳ ಸ್ಥಾಯಿ ಸಮಿತಿಯ ಅಧಿಕಾರವನ್ನು ಚಲಾಯಿಸಿ ಮಾನ್ಯ ಆಡಳಿತಗಾರರು ಒಪ್ಪಿರುವುದರಿಂದ, ಸದರಿ ಆದೇಶವನ್ನು ಪಾಲಿಕೆಯಲ್ಲಿ ಅಳವಡಿಸಿಕೊಳ್ಳಲಾಗಿದೆ.

ಇದರಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಎಲ್ಲಾ ಅಧಿಕಾರಿ / ನೌಕರರು ಕೆಂಪು-ಹಳದಿ ಬಣ್ಣದ ಗುರುತಿನ ಚೀಟಿಯ ಕೊರಳುದಾರವನ್ನು (ಟ್ಯಾಗ್) ಕಡ್ಡಾಯವಾಗಿ ಧರಿಸುವಂತೆ ಕ್ರಮ ಕೈಗೊಳ್ಳಲು ಎಲ್ಲಾ ಬಟವಾಡೆ ಅಧಿಕಾರಿಗಳಿಗೆ ಸೂಚಿಸಿದೆ.

28/10

ಮಾನ್ಯ ಮುಖ್ಯ ಆಯುಕ್ತರು ರವರ
ಆದೇಶದಂತೆ

ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

28.10.24 28-10-2024

**ಪ್ರತಿಯನ್ನು:**

: ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ವಿಶೇಷ ಆಯುಕ್ತರು (ಹಣಕಾಸು) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಎಲ್ಲಾ ವಲಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಎಲ್ಲಾ ವಲಯ ಅಪರ / ಜಂಟಿ ಆಯುಕ್ತರು ರವರುಗಳಿಗೆ ಕಳುಹಿಸಿದೆ.
: ಎಲ್ಲಾ ವಲಯ ಇಲಾಖಾ ಮುಖ್ಯಸ್ಥರು / ಎಲ್ಲಾ ಬಟವಾಡೆ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
: ನಿರ್ದೇಶಕರು, ಮಾಹಿತಿ ತಂತ್ರಜ್ಞಾನ / ಉಪ ಮುಖ್ಯ ಮಾಹಿತಿ ಅಧಿಕಾರಿ ರವರಿಗೆ ಕಳುಹಿಸಿದೆ.
: ಮುಖ್ಯ ಲೆಕ್ಕಾಧಿಕಾರಿ / ಮುಖ್ಯ ಲೆಕ್ಕ ಪರಿಶೋಧಕರು ರವರಿಗೆ ಕಳುಹಿಸಿದೆ.
: ಎಲ್ಲಾ ವಲಯ ಉಪ ನಿಯಂತ್ರಕರು (ಹಣಕಾಸು) ರವರಿಗೆ ಕಳುಹಿಸಿದೆ.
: ಕಛೇರಿ ಪ್ರತಿ.